# 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

## S.C.103/2017

ದಿಃ 08.09.2022

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-8 Pw-14

ಹೆಸರು : ಶಂಕರಪ್ಪ ಆರ್
ತಂದೆಯ ಹೆಸರು : ಲೇ. ರಂಗಪ್ಪ
ವಯಸ್ಸು : 39 ವರ್ಷ
ಉದ್ಯೋಗ : ವ್ಯಾಪಾರ
ವಾಸಸ್ಥಳ : ದೇವಮಾಚೋಹಳ್ಳಿ

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

1. ಈಗ ಸುಮಾರು 4-5 ವರ್ಷಗಳ ಹಿಂದೆ ಒಂದು ದಿನ ಪೊಲೀಸರು, ತಾವರೆಕೆರೆ ಪೊಲೀಸ್ ಠಾಣೆಗೆ ನನ್ನನ್ನು ಕರೆಸಿಕೊಂಡು, ಒಂದು ದಸ್ತಾವೇಜಿನ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ.

2. ಸದರಿ ದಸ್ತಾವೇಜನ್ನು ಈಗ ನೋಡಿ ಗುರುತಿಸುತ್ತಿದ್ದು, ಅದನ್ನು ಈಗಾಗಲೇ ನಿ.ಪಿ.12 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ನನ್ನ ಸಹಿಯನ್ನು ಈಗ ನಿ.ಪಿ.12(ಸಿ) ಎಂದು ಗುರುತಿಸಲಾಯಿತು.

3. ನಿ.ಪಿ.12ರಲ್ಲಿ ಏನು ಬರೆದಿದೆ ಎಂಬುದು ನನಗೆ ಮಾಹಿತಿ ಇರುವುದಿಲ್ಲ.

4. ಪೊಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ಶವ ಪಂಚನಾಮೆಯನ್ನು ಮಾಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

5. ಈಗ ನನಗೆ ಓದಿ ಹೇಳಿದ ನಿ.ಪಿ.12 ರಂತೆ ದಿಃ12.10.2016 ರಂದು ಬೆಳಿಗ್ಗೆ 11.30 ರಿಂದ 2.30 ರವರೆಗೆ ಮೃತ ಡಿ ಸಿ ನವೀನ್ ಕುಮಾರ್ ಈತನ ಶವದ ಪಂಚನಾಮೆಯನ್ನು ಪೊಲೀಸರು ನನ್ನ ಸಮಕ್ಷಮದಲ್ಲಿ, ರಾಜರಾಜೇಶ್ವರಿ ಆಸ್ಪತ್ರೆಯಲ್ಲಿನ ಶವಾಗಾರದಲ್ಲಿ ಮಾಡಿ, ಅದರ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

6. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ. ಕೆ.ವಿ.ಕೆ., ವಕೀಲರಿಂದ ಆರೋಪಿಗಳ ಪರವಾಗಿಃ ಏನೂ ಇಲ್ಲವೆಂದು ಹೇಳಿರುತ್ತಾರೆ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.